ರಾಜ್ಯದಲ್ಲಿ ಲೆಕ್ಕ ಪರಿಶೋಧನಾ ಮತ್ತು ಯೋಜನಾಧಿಕಾರಿಗಳ ಹುದ್ದೆ.

1624 - ಶ್ರೀ ಯು.ಆರ್. ಸಭಾಪತಿ (ಉಡುಪಿ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. *ರಾಜ್ಯದ ತಾಲ್ಲೂಕು ಪಂಚಾಯಿತಿಗಳಿಗೆ ಮಂಜೂರಾದ ಲೆಕ್ಕ ಪರಿಶೋಧನಾಧಿಕಾರಿ ಮತ್ತು ಯೋಜನಾಧಿಕಾರಿಗಳ ಹುದ್ದೆಗಳು ಎಷ್ಟು?*

2. *ಮಂಜೂರಾತಿಯಾಗಿರುವ ಈ ಹುದ್ದೆಗಳಲ್ಲಿ ಎಷ್ಟು ಹುದ್ದೆಗಳನ್ನು ತುಂಬಲಾಗಿದೆ ತುಂಬದಿದ್ದಲ್ಲಿ ಸರ್ಕಾರ ಈ ಬಗ್ಗೆ ತೆಗೆದುಕೊಳ್ಳುವ ಕ್ರಮಗಳೇನು? (ವಿವರ ನೀಡುವುದು)*

ಶ್ರೀ ಎಂ.ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು) :

1. ಪ್ರತಿ ತಾಲ್ಲೂಕು ಪಂಚಾಯ್ತಿಗೆ ಒಬ್ಬ ಲೆಕ್ಕ ಅಧೀಕ್ಷಕರ ಹುದ್ದೆಯನ್ನು ಸೃಜಿಸಲಾಗಿದೆ. ಲೆಕ್ಕ ಪರಿಶೋಧನಾಧಿಕಾರಿ ಮತ್ತು ಯೋಜನಾಧಿಕಾರಿಗಳ ಹುದ್ದೆಗಳನ್ನು ಸೃಜಿಸಿರುವುದಿಲ್ಲ.

2. ಎಲ್ಲಾ ತಾಲ್ಲೂಕು ಪಂಚಾಯಿತಿಗಳಲ್ಲಿಯ ಲೆಕ್ಕ ಅಧೀಕ್ಷಕರ ಹುದ್ದೆಗಳನ್ನು ಈಗಾಗಲೇ ತುಂಬಲಾಗಿದೆ.

ರಾಜ್ಯದಲ್ಲಿ ಖಾಲಿ ಇರುವ ವೈದ್ಯರುಗಳ ಹುದ್ದೆ.

1625 - ಶ್ರೀ ಯು.ಆರ್. ಸಭಾಪತಿ (ಉಡುಪಿ) : ಮಾನ್ಯ ಆರೋಗ್ಯ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ರಾಜ್ಯದಲ್ಲಿ ಖಾಲಿ ಇರುವ ವೈದ್ಯರುಗಳ ಸಂಖ್ಯೆ ಎಷ್ಟು?*

ಆ) *ಈ ವೈದ್ಯರುಗಳ ಹುದ್ದೆಯನ್ನು ಯಾವಾಗ ಭರ್ತಿ ಮಾಡಲಾಗುವುದು?*

ಇ) *ಇದರಿಂದ ಸಾರ್ವಜನಿಕರಿಗೆ ತೊಂದರೆ ಯುಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? (ವಿವರ ನೀಡುವುದು.)*

ಡಾ॥ ಹೆಚ್.ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) 733

ಆ) ಗ್ರಾಮಾಂತರ ಪ್ರದೇಶದಲ್ಲಿ ಖಾಲಿ ಇರುವ 269 ವೈದ್ಯರ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿ ಭರ್ತಿ ಮಾಡಲು ಎಲ್ಲಾ ಜಿಲ್ಲಾಧಿಕಾರಿಗಳಿಗೆ ಈಗಾಗಲೇ ಸೂಚನೆ ನೀಡಲಾಗಿದೆ. ಜಿಲ್ಲಾ ಮಟ್ಟದ ಮತ್ತು ತಾಲ್ಲೂಕು ಮಟ್ಟದ ಆಸ್ಪತ್ರೆಗಳಲ್ಲಿ ಖಾಲಿ ಇರುವ ೪೬೪ ಹುದ್ದೆಗಳನ್ನು 1998ನೇ ಸಾಲಿನ ಸಾಮಾನ್ಯ ವರ್ಗಾವಣೆ ಸಮಯದಲ್ಲಿ ಹಾಗೂ ಸ್ನಾತಕೋತ್ತರ ವ್ಯಾಸಂಗ ಮುಗಿಸಿ ನೇಮಕಾತಿಗಾಗಿ ಕಾಯುತ್ತಿರುವ ವೈದ್ಯರಿಂದ ಭರ್ತಿಮಾಡಲು ಕ್ರಮ ಕೈಗೊಳ್ಳಲಾಗುವುದು.

ಇ) ಹೌದು. ತೊಂದರೆಯನ್ನು ನಿವಾರಿಸಲು ಹತ್ತಿರವಿರುವ ಪ್ರಾ.ಆ.ಕೇಂದ್ರ: ಘಟಕಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವೈದ್ಯರುಗಳನ್ನು ಪ್ರಭಾರದ ಮೇಲೆ ನೇಮಕ ಮಾಡಿದೆ.